# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ**

ನಂ. 09, 2ನೇ ಮಹಡಿ, 1ನೇ ಮುಖ್ಯರಸ್ತೆ, (ಹೊರವರ್ತುಲ ರಸ್ತೆ),ಕೆಂಗೇರಿ ಉಪನಗರ,ಬೆಂಗಳೂರು-60.

**ಸಂಖ್ಯೆ : ಸ.ಇಂ/ವಾ-33/ವಾರ್ಡ್‌ಸಭೆ/2022-23** **ದಿನಾಂಕ : 22.12.2022**

## ವಾರ್ಡ್-33(ಕೆಂಗೇರಿ)ರ ವಾರ್ಡ್ ಸಭೆಯ ನಡವಳಿ.

ಶ್ರೀ ಕೆ.ಆರ್.ಸತೀಶ್ ಕುಮಾರ್, ಕಂದಾಯ ಅಧಿಕಾರಿ, ರಾರಾನಗರ ಉಪವಲಯ ರವರಿಗೆ ಚುನಾವಣಾ ತುರ್ತುಸಭೆ ಇದ್ದ ಕಾರಣ ಸದರಿಯವರ ಆದೇಶದ ಮೇರೆಗೆ ದಿನಾಂಕ: 22/12/2022 ರಂದು ಕೆಂಗೇರಿ ಉಪ ವಿಭಾಗ ವಾರ್ಡ್-33ರ ವಾರ್ಡ್ ಕಛೇರಿಯಲ್ಲಿ ವಾರ್ಡ್ ಸಮಿತಿಯ ಕಾರ್ಯದರ್ಶಿ ರವರ ಅಧ್ಯಕ್ಷತೆಯಲ್ಲಿ ನಡೆದ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

**ಹಾಜರಿದ್ದವರು:**

| ಕ್ರ ಸಂ | ಸದಸ್ಯರ ಹೆಸರು | ಪದನಾಮ/ಇಲಾಖೆ | ಹಾಜರಾತಿ |
|---|---|---|---|
| 1. | ಶ್ರೀ ಕೆ.ಆರ್.ಸತೀಶ್ ಕುಮಾರ್ | ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ಕಂದಾಯ ಅಧಿಕಾರಿ, ರಾರಾನಗರ ಉಪವಲಯ, ಬಿ.ಬಿ.ಎಂ.ಪಿ | - |
| 2. | ಶ್ರೀ ಎನ್.ನಟರಾಜ | ವಾರ್ಡ್ ಸಮಿತಿ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ನಂ.33, ಕೆಂಗೇರಿ | ಹಾಜರಿದ್ದರು |
| 3. | ಶ್ರೀ ಪೂರ್ಣಿಮಾ ಜಿ.ಆರ್ | ಸಹಾಯಕ ಕಾರ್ಯಪಾಲಕ ಅಭಿಯಂತರರು ಕೆಂಗೇರಿ ವಿಭಾಗ, ಬಿಬಿಎಂಪಿ | ಹಾಜರಿದ್ದರು |
| 4. | ಡಾ॥ ರೇಷ್ಮಾ.ಹೆಚ್ | ಆರೋಗ್ಯ ವೈಧ್ಯಾಧಿಕಾರಿ ಬಿ.ಬಿ.ಎಂ.ಪಿ | ಹಾಜರಿದ್ದರು |
| 5. | ಶ್ರೀ ರವಿಚಂದ್ರ | ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ | ಹಾಜರಿದ್ದರು |
| 6. | ಶ್ರೀ ಬಿ.ಕೆ ಚಂದ್ರಶೇಖರ್ | ಕಿರಿಯ ಅಭಿಯಂತರರು ಬೆಸ್ಕಾಂ, ಬೆಂಗಳೂರು | ಹಾಜರಿದ್ದರು |
| 7. | ಶ್ರೀ ಚೇತನ್ | ಅಭಿಯಂತರರು ಬೆಸ್ಕಾಂ, ಬೆಂಗಳೂರು | ಹಾಜರಿದ್ದರು |
| 8. | ಶ್ರೀ ರಾಮು.ಬಿ.ಸಿ | ಹಿರಿಯ ಆರೋಗ್ಯ ಪರಿವೀಕ್ಷಕರು ಘನತ್ಯಾಜ್ಯ ನಿರ್ವಹಣೆ, ಬಿಬಿಎಂಪಿ | ಹಾಜರಿದ್ದರು |



Scanned with CamScanner

| | | | |
|---|---|---|---|
| 9. | ಶ್ರೀ ನವೀನ್ ಕುಮಾರ್ | ಕಿರಿಯ ಆರೋಗ್ಯ ಪರಿವೀಕ್ಷಕರು<br>ಘನತ್ಯಾಜ್ಯ ನಿರ್ವಹಣೆ, ಬಿಬಿಎಂಪಿ | ಹಾಜರಿದ್ದರು |
| 10. | ಶ್ರೀ ರಾಮಸಂಜೀವಯ್ಯ | ಸ್ಯಾನಿಟರಿ ವಿಭಾಗ<br>ಬಿ.ಡಬ್ಲ್ಯೂ.ಎಸ್.ಎಸ್.ಬಿ | ಹಾಜರಿದ್ದರು |
| 11. | ಶ್ರೀ ಚಂದ್ರಶೇಖರ್ | ಕಂದಾಯ ಪರಿವಿಕ್ಷಕರು<br>ಕೆಂಗೇರಿ ಉಪವಲಯ, ಬಿಬಿಎಂಪಿ | ಹಾಜರಿದ್ದರು |

| ಕ್ರಸಂ | ಸಭೆಗೆ ಗೈರು ಹಾಜರಾದ ಅಧಿಕಾರಿಗಳು | ಇಲಾಖೆ |
|---|---|---|
| 1. | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ಬೃಹತ್ ನೀರುಗಾಲುವೆ ವಿಭಾಗ, ಬಿ.ಬಿ.ಎಂ.ಪಿ, ರಾರಾನಗರ ವಲಯ |
| 2. | ವಲಯ ಅರಣ್ಯ ಅಧಿಕಾರಿಗಳು | ಅರಣ್ಯ ಇಲಾಖೆ, ಬಿ.ಬಿ.ಎಂ.ಪಿ, ರಾಜರಾಜೇಶ್ವರಿನಗರ ವಲಯ, |
| 3. | ತೋಟಗಾರಿಕಾ ಅಧಿಕ್ಷಕರು | ತೋಟಗಾರಿಕೆ ಇಲಾಖೆ, ಬಿಬಿಎಂಪಿ, ರಾಜರಾಜೇಶ್ವರಿನಗರ ವಲಯ, |
| 4. | ಠಾಣಾಧಿಕಾರಿಗಳು<br>ಉಲ್ಲಾಳು ಪೊಲೀಸ್ ಠಾಣೆ | ಆರ್.ಟಿ.ಓ |
| 5. | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ಬೀದಿ ದೀಪ ನಿರ್ವಹಣೆ,<br>ರಾರಾನಗರ ವಲಯ, ಬಿಬಿಎಂಪಿ |
| 6. | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ಬೃಹತ್ ನೀರುಗಾಲುವೆ ವಿಭಾಗ<br>ರಾರಾನಗರ ವಲಯ, ಬಿಬಿಎಂಪಿ |

ಶ್ರೀ ನಟರಾಜ್.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳನ್ನು ಹಾಗೂ ಸಭೆಯಲ್ಲಿ ಭಾಗವಹಿಸಿದ್ದ ಎಲ್ಲರನ್ನೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸಿ, ಸಭೆಯಲ್ಲಿ ವಾರ್ಡ್‌ನಲ್ಲಿ ಕುಂದು ಕೊರತೆಯ ಬಗ್ಗೆ ಚರ್ಚಿಸಲು ಮನವಿ ಮಾಡಲಾಯಿತು.



Scanned with CamScanner

1) ಸಭೆಯಲ್ಲಿ ಆರೋಗ್ಯ ಅಧಿಕಾರಿಗಳಾದ ಡಾ॥ ರೇಷ್ಮಾ ರವರು ಸಭೆಯನ್ನು ಉದ್ದೇಶಿಸಿ ಮಾತನಾಡಿ ಸಾರ್ವಜನಿಕರ ಕೋವಿಡ್-19ರ ಸಾಂಕ್ರಾಮಿಕ ರೋಗದ (ರೂಪಾಂತರಿ ಕರೋನದ) ಬಗ್ಗೆ ಅರಿವುದ ಮೂಡಿಸುವ ಸಲುವಾಗಿ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು, ಮತ್ತು ಕೋವಿಡ್-19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್-19ರ ಲಸಿಕೆಯನ್ನು ಪಡೆಯಲು ಸಾರ್ವಜನಿಕರು ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸಭೆಯಲ್ಲಿ ತಿಳಿಸಿದರು. ಕೋವಿಡ್ ಸುರಕ್ಷತಾ ನಿಯಮಾವಳಿಯನ್ನು ತಪ್ಪದೇ ಪಾಲಿಸಲು ಮತ್ತು ಮಾಸ್ಕ್ ಹಾಗೂ ಸ್ಯಾನಿಟೈಸರ್ ಖಡ್ಡಾಯವಾಗಿ ಉಪಯೋಗಿಸಲು ಸಭೆಯಲ್ಲಿ ಹಾಜರಿದ್ದ ಎಲ್ಲಾ ಸ್ಥಳಿಯ ನಿವಾಸಿಗಳಿಗೆ ಹಾಗೂ ಬಡಾವಣೆಯ ಪ್ರತಿನಿಧಿಗಳಿಗೆ ತಿಳಿಸಲಾಯಿತು ಮತ್ತು ಕೋವಿಡ್ ಬೂಸ್ಟರ್ ಲಸಿಕೆಯನ್ನು ಪಡೆದುಕೊಳ್ಳಲು ಮತ್ತು ಇದರ ಸದುಪಯೋಗ ಪಡೆಯಲು ಸಭೆಯಲ್ಲಿ ಹಾಜರಿದ್ದ ಎಲ್ಲರಿಗೂ ತಿಳಿಸಿದರು:

2) ಸಭೆಯಲ್ಲಿ ಕೆಲವು ನಾಗರೀಕರು ಮಾತನಾಡಿ ವಾರ್ಡ್ ನಂ.33, ಕೆಂಗೇರಿ ವ್ಯಾಪ್ತಿಯಲ್ಲಿ ಕೆಲವು ರಸ್ತೆಗಳಲ್ಲಿ ಈಗಾಗಲೇ ಮಳೆಯಿಂದ ಉಂಟಾಗಿರುವ ರಸ್ತೆ ಗುಂಡಿಗಳನ್ನು ಮುಚ್ಚುಲು ಕ್ರಮ ಕೈಗೊಳ್ಳಲು ಸಭೆಯಲ್ಲಿ ಕೋರಿದರು.

ಈ ಬಗ್ಗೆ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ಈ ವಾರ್ಡ್ ನಂ.33(ಕೆಂಗೇರಿ) ವ್ಯಾಪ್ತಿಯಲ್ಲಿ ಬರುವ ರಸ್ತೆಗಳಲ್ಲಿ ಉಂಟಾಗಿರುವ ರಸ್ತೆಗುಂಡಿಗಳನ್ನು ಈಗಾಗಲೇ ಮುಚ್ಚಲಾಗಿದ್ದು, ಇತ್ತೀಚಿನ ದಿನಗಳಲ್ಲಿ ಉಂಟಾಗಿರುವ ರಸ್ತೆ ಗುಂಡಿಗಳನ್ನು ಮುಂದಿನ ದಿನಗಳಲ್ಲಿ ಡಾಂಬರು ಸರಬರಾಜು ಪೂರೈಕೆಯ ಮೇರೆಗೆ ಮುಚ್ಚಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

3) ಸಭೆಯಲ್ಲಿ ನಾಗರೀಕರಾದ ಶ್ರೀಮತಿ ಅನುಪಮ ರವರು ಮಾತಾಗಿ ಎಂ.ಟಿ.ಎಸ್. ಬಡಾವಣೆಯ ಕೆಲವು ರಸ್ತೆಗಳನ್ನು ಅಭಿವೃದ್ಧಿಪಡಿಸಲು ಸಭೆಯಲ್ಲಿ ಕೋರಿದರು.

ಈ ಬಗ್ಗೆ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ಈಗಾಗಲೇ ಅಮೃತ ನಗರೋತ್ಥಾನದಲ್ಲಿ ಕೆಲವು ರಸ್ತೆಗಳನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಿರುವುದಾಗಿ ಸಭೆಗೆ ತಿಳಿಸಿದರು.

4) ವಾರ್ಡ್ ನಂ.33ರ ವ್ಯಾಪ್ತಿಯಲ್ಲಿ ಬರುವ ರಸ್ತೆಗಳ ಅಕ್ಕಪಕ್ಕದಲ್ಲಿರುವ ಒಣಗಿರುವ ಮರಗಳ ಕೊಂಬೆಗಳನ್ನು ಕತ್ತರಿಸಿ ತೆರವುಗೊಳಿಸದೇ ಹಾಗೇ ಬಿಟ್ಟಿರುವುದರಿಂದ ಪಾದಾಚಾರಿಗಳ ಸಂಚಾರಕ್ಕೆ ತೊಂದರೆಯಾಗುತ್ತಿರುವ ಬಗ್ಗೆ ಸಾರ್ವಜನಿಕರು ಸಭೆಯಲ್ಲಿ ತಿಳಿಸಿದರು.



Scanned with CamScanner

ಈ ಸಂಬಂಧ ವಾರ್ಡ್ ಸಭೆಯ ಕಾರ್ಯದರ್ಶಿರವರು ಮಾತನಾಡಿ ವಾರ್ಡ್ ನಂ.33, ಕೆಂಗೇರಿ ವ್ಯಾಪ್ತಿಯಲ್ಲಿ ರಸ್ತೆಗಳ ಅಕ್ಕಪಕ್ಕದಲ್ಲಿರುವ ಮರಗಳ ಒಣಗಿದ ಕೊಂಬೆಗಳನ್ನು ಕತ್ತರಿಸಲು ತೆರವುಗೊಳಿಸಲು ಸಂಬಂಧಪಟ್ಟ ಅಧಿಕಾರಿಯವರಿಗೆ ಕ್ರಮವಹಿಸಲು ಈಗಾಗಲೇ ಪತ್ರದ ಮುಖೇನ ತಿಳಿಸಲಾಗಿದೆ ಹಾಗೂ ಕತ್ತರಿಸಿದ ಮರಗಳ ಕೊಂಬೆಗಳನ್ನು ತೆರವುಗೊಳಿಸಲು ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರು (ಪ್ರ.ತ್ಯಾನಿ) ರವರಿಗೆ ತಿಳಿಸಿದರು.

5) ವಾರ್ಡ್‌ನ ನಾಗರೀಕರು ಸಭೆಯಲ್ಲಿ ಮಾತನಾಡಿ ವಾರ್ಡ್ ನಂ.33, ಕೆಂಗೇರಿ ವ್ಯಾಪ್ತಿಯಲ್ಲಿ ಬೀದಿ ದೀಪಗಳನ್ನು ಸರಿಯಾಗಿ ಅಳವಡಿಸದೇ ಇರುವುದರಿಂದ ರಾತ್ರಿ ವೇಳೆಯಲ್ಲಿ ಬೀದಿ ದೀಪಗಳು ಸರಿಯಾಗಿ ಕೆಲಸ ನಿರ್ವಹಿಸುತ್ತಿಲ್ಲವೆಂದು ತಿಳಿಸಿದರು.

ಈ ಸಂಬಂಧ ವಾರ್ಡ್ ಸಭೆಯ ಕಾರ್ಯದರ್ಶಿರವರು ಮಾತನಾಡಿ ಸದರಿ ಸಮಸ್ಯೆಯನ್ನು ಬಗೆಹರಿಸಲು . ಕ್ರಮವಹಿಸುವಂತೆ ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು(ವಿದ್ಯುತ್) ರವರಿಗೆ ಪತ್ರದ ಮುಖೇನ ಮುಂದಿನ ಸಭೆಗೆ ಹಾಜರಾಗಲು ತಿಳಿಸುವುದಾಗಿ ಸಭೆಗೆ ತಿಳಿಸಿದರು.

6) ವಾರ್ಡ್ ನಂ.33, ಕೆಂಗೇರಿ ವ್ಯಾಪ್ತಿಯಲ್ಲಿ ಬರುವ ಕೆಂಗೇರಿ ಕೆರೆಗೆ ಸೆಕ್ಯೂರಿಟಿ ಗಾರ್ಡ್‌ಗಳನ್ನು ನಿಯೋಜಿಸುವಂತೆ, ಸದರಿ ಕೆರೆಯ ನಿರ್ವಹಣೆಯನ್ನು . ಸರಿಯಾಗಿ ಮಾಡುತ್ತಿಲ್ಲವೆಂದು ಹಾಗೂ ತ್ಯಾಜ್ಯ ನೀರು ಕೆರೆಗೆ ಸೇರುತ್ತಿದೆ ಎಂದು ಎಂ.ಟಿ.ಎಸ್ ಬಡಾವಣೆ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಶ್ರೀ ಕದರಪ್ಪರವರು ಸಭೆಯಲ್ಲಿ ತಿಳಿಸಿದರು.

ಈ ಸಂಬಂಧ ವಾರ್ಡ್ ಸಭೆಯ ಕಾರ್ಯದರ್ಶಿರವರು ಮಾತನಾಡಿ ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು(ಕೆರೆಗಳು) ರವರಿಗೆ ಪತ್ರದ ಮುಖೇನ ಮುಂದಿನ ಸಭೆಗೆ ಹಾಜರಾಗಲು ತಿಳಿಸುವುದಾಗಿ ಸಭೆಗೆ ತಿಳಿಸಿದರು.

7) ವಾರ್ಡ್ ನಂ.33, ಕೆಂಗೇರಿ ವ್ಯಾಪ್ತಿಯಲ್ಲಿ ಬರುವ ಉದ್ಯಾನವನಗಳನ್ನು ಸರಿಯಾಗಿ ನಿರ್ವಹಣೆ ಮಾಡದೇ ಇರುವುದರಿಂದ, ಉದ್ಯಾನವನಗಳ ಗೇಟ್‌ಗಳು ಮತ್ತು ಉದ್ಯಾನವನಗಳಿಗೆ ಅಳವಡಿಸಿರುವ ಫೆನ್ಸಿಂಗ್ ಹಾಳಾಗಿರುತ್ತವೆ. ಆದುದರಿಂದ ಉದ್ಯಾನವನಗಳನ್ನು ಸರಿಯಾಗಿ ನಿರ್ವಹಣೆ ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ನಾಗರೀಕರು ಹಾಗೂ ವಾರ್ಡ್ ಸಮಿತಿ ಸದಸ್ಯರು ಸಭೆಯಲ್ಲಿ ಕೋರಿದರು.



Scanned with CamScanner

ಈ ಸಂಬಂಧ ವಾರ್ಡ್ ಸಭೆಯ ಕಾರ್ಯದರ್ಶಿರವರು ಮಾತನಾಡಿ ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು(ಯೋಜನಾ ವಿಭಾಗ), ರಾರಾನಗರ ವಲಯ ಹಾಗೂ ತೋಟಗಾರಿಕಾ ಅಧೀಕ್ಷಕರು ರವರಿಗೆ ಪತ್ರದ ಮುಖೇನ ಮುಂದಿನ ಸಭೆಗೆ ಹಾಜರಾಗಲು ತಿಳಿಸುವುದಾಗಿ ಸಭೆಗೆ ತಿಳಿಸಿದರು.

8) a) ಪ್ರಸ್ತುತ ಚಳಿಗಾಲವಾಗಿದ್ದು, ಮರಗಳಿಂದ ಎಲೆಗಳು ಉದುರುತ್ತಿರುವುದರಿಂದ ರಸ್ತೆಗಳಲ್ಲಿ ಮರದ ಎಲೆಗಳಿಂದಾಗಿ ಕಸವು ಹೆಚ್ಚಾಗುತ್ತಿರುವ ಬಗ್ಗೆ ಸಾರ್ವಜನಿಕರು ಸಭೆಯಲ್ಲಿ ತಿಳಿಸಿದರು.

b) ವಾರ್ಡ್ ನಂ.33, ಕೆಂಗೇರಿ ವ್ಯಾಪ್ತಿಯಲ್ಲಿ ಬರುವ ಕೆಂಗೇರಿ ಪ್ರಾಥಮಿಕ ಆರೋಗ್ಯ ಕೇಂದ್ರ, ಸುತ್ತಮುತ್ತಲಿರುವ ಬೀದಿಬದಿ ವ್ಯಾಪಾರಿಗಳು ತಮ್ಮ ಅಂಗಡಿಗಳಲ್ಲಿ ಉತ್ಪತ್ತಿಯಾಗುತ್ತಿರುವ ತ್ಯಾಜ್ಯ(ಕಸ್ತುವನ್ನು) ರಸ್ತೆಯ ಬದಿಯಲ್ಲೇ ಹಾಕುತ್ತಿರುವುದರಿಂದ ರೋಗಗಳು ಹರಡುವ ಸಂಭವಿರುತ್ತದೆ. ಆದುದರಿಂದ ತ್ಯಾಜ್ಯವನ್ನು ಸರಿಯಾಗಿ ನಿರ್ವಹಣೆ ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಸಭೆಯಲ್ಲಿ ಹಾಗರಿದ್ದ ಆರೋಗ್ಯ ವೈದ್ಯಾಧಿಕಾರಿ ರವರು ತಿಳಿಸಿದರು.

c) ವಾರ್ಡ್ ನಂ.33, ಕೆಂಗೇರಿ ವ್ಯಾಪ್ತಿಯಲ್ಲಿ ಬರುವ ಬೆಸ್ಕಾಂ ಕಛೇರಿಯ ಸುತ್ತಮುತ್ತ ಹಾಗೂ ರಸ್ತೆಗಳಲ್ಲಿ ಘನತ್ಯಾಜ್ಯ ವಿಲೇವಾರಿ ಸರಿಯಾಗಿ ಆಗುತ್ತಿಲ್ಲವೆಂದು ಕಿರಿಯ ಅಭಿಯಂತರರು(ಬೆಸ್ಕಾಂ) ರವರು ಸಭೆಯಲ್ಲಿ ತಿಳಿಸಿದರು.

d) ವಾರ್ಡ್ ನಂ.33, ಕೆಂಗೇರಿ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ ಕಾರ್ಯಕ್ಕಾಗಿ ನಿಯೋಜಿಸಿರುವ ಮೇಸ್ತ್ರಿ ಹಾಗೂ ಪೌರಕಾರ್ಮಿಕರುಗಳ ಹಾಜರಾತಿ ಪುಸ್ತಕವನ್ನು ಪರಿಶೀಲನೆಗಾಗಿ ವಾರ್ಡ್ ಸಭೆಯಲ್ಲಿ ಸಲ್ಲಿಸುವಂತೆ ಶ್ರೀ ಕದರಪ್ಪ, ನಾಗರೀಕರು ರವರು ಸಭೆಯಲ್ಲಿ ಕೋರಿದರು.

e) ವಾರ್ಡ್ ನಂ.33, ಕೆಂಗೇರಿ ವ್ಯಾಪ್ತಿಯಲ್ಲಿ ಬರುವ ಸನ್‌ಸಿಟಿ ಬಡಾವಣೆಯಲ್ಲಿ ಘನತ್ಯಾಜ್ಯ ವಿಲೇವಾರಿಯನ್ನು ಸಮರ್ಪಕವಾಗಿ ಮಾಡುತ್ತಿಲ್ಲವೆಂದು ಶ್ರೀ ಡಿ. ಪ್ರಭು, ನಾಗರೀಕರು ವಾರ್ಡ್ ಸಮಿತಿ ಸಭೆಯಲ್ಲಿ ತಿಳಿಸಿದರು.

ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು(ಘ.ತ್ಯಾ)ರವರು ಮಾತನಾಡಿ ಇನ್ನು ಮುಂದೆ ಘನತ್ಯಾಜ್ಯ ವಿಲೇವಾರಿ ಮಾಡಲು ಕ್ರಮವಹಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು ಹಾಗೂ ಮುಂದಿನ ಸಭೆಯಲ್ಲಿ ಘನತ್ಯಾಜ್ಯ ನಿರ್ವಹಣೆ ಕಾರ್ಯಕ್ಕಾಗಿ ನಿಯೋಜಿಸಿರುವ ಮೇಸ್ತ್ರಿ ಹಾಗೂ ಪೌರಕಾರ್ಮಿಕರುಗಳ ಹಾಜರಾತಿ ಪುಸ್ತಕವನ್ನು ಪರಿಶೀಲನೆಗಾಗಿ ನೀಡಲಾಗುವುದು ಮತ್ತು ಸನ್‌ಸಿಟಿ ಬಡಾವಣೆಯಲ್ಲಿ ಘನತ್ಯಾಜ್ಯ ವಿಲೇವಾರಿ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಲು ಕ್ರಮವಹಿಸಲಾಗುವುದೆಂದೆ ಸಭೆಯಲ್ಲಿ ತಿಳಿಸುತ್ತಾ, ಸದರಿ ವಾರ್ಡ್‌ನಲ್ಲಿ



Scanned with CamScanner

ಘನತ್ಯಾಜ್ಯ ಹೆಚ್ಚಾಗಿ ಉತ್ಪತ್ತಿಯಾಗುತ್ತಿದ್ದು, ಈ ಸಂಬಂಧ ಒಂದು ಕಾಂಪ್ಯಾಕ್ಟರ್‌ನ್ನು ಈ ವಾರ್ಡ್‌ಗೆ ನಿಯೋಜಿಸುವಂತೆ ಸಭೆಯಲ್ಲಿ ತಿಳಿಸಿದರು.

ಕಾರ್ಯದರ್ಶಿಗಳು ಸಭೆಗೆ ಹಾಜರಿದ್ದ ಅಧಿಕಾರಿ/ ಸಿಬ್ಬಂದಿವರ್ಗದವರು ಹಾಗೂ ಸಾರ್ವಜನಿಕರಿಗೆ ವಂದನಾರ್ಪಣೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಎಸ್.ಎನ್.ರಾಜ)
ಕಾರ್ಯದರ್ಶಿ
ಸ.ಅ. ವಾರ್ಡ್ ನಂ.33, ಕೆಂಗೇರಿ

(ಕೆ.ಆರ್.ಸತೀಶ್ ಕುಮಾರ್)
ಕಂದಾಯ ಅಧಿಕಾರಿ
ಹಾಗೂ ವಾರ್ಡ್ ಸಮಿತಿ ಸಭೆ ಅಧ್ಯಕ್ಷರು
ವಾರ್ಡ್‌ನಂ. –33, ಕೆಂಗೇರಿ

ರವರಿಗೆ,

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ಕಾರ್ಯಪಾಲಕ ಅಭಿಯಂತರರು, ಕೆಂಗೇರಿ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
3) ಸಹಾಯಕ ಕಂದಾಯ ಅಧಿಕಾರಿ ಅಧಿಕಾರಿಗಳು, ಕೆಂಗೇರಿ ವಲಯ ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು, (ಘ.ತ್ಯಾ.ನಿ) ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
5) ಪೊಲೀಸ್ ಇನ್ಸ್‌ಪೆಕ್ಟರ್, ಕೆಂಗೇರಿ ಪೊಲೀಸ್ ಠಾಣೆ (ಕಾನೂನು ಸುವ್ಯವಸ್ಥೆ) ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
6) ಪೊಲೀಸ್ ಇನ್ಸ್‌ಪೆಕ್ಟರ್, ಕೆಂಗೇರಿ ಪೊಲೀಸ್ ಠಾಣೆ (ಸಂಚಾರಿ) ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
7) ಆರೋಗ್ಯ ಅಧಿಕಾರಿ, ಕೆಂಗೇರಿ, ಕೆಂಗೇರಿ ಉಪನಗರ ಪ್ರಾ.ಆ.ಕೇಂದ್ರ ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
8) ಸಹಾಯಕ ಇಂಜಿನಿಯರ್, ಬೆಸ್ಕಾಂ ಕೆಂಗೇರಿ ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
9) ಸಹಾಯಕ ಇಂಜಿನಿಯರ್ ಬಿ.ಡಬ್ಲ್ಯೂ.ಎಸ್. ಎಸ್.ಬಿ., ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
10) ತೋಟಗಾರಿಕಾ ಅಧೀಕ್ಷಕರು, ರಾ.ರಾ.ನಗರ ವಲಯ ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
11) ವಾರ್ಡ್ ವ್ಯಾಪ್ತಿಯ ಸಾರ್ವಜನಿಕರು, ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಲು ಅನುವಾಗುವಂತೆ ಸೂಚನಾ ಫಲಕಕ್ಕೆ ಅಳವಡಿಸಲು
12) ಎಲ್ಲಾ ವಾರ್ಡ್ ಕಮಿಟಿ ಸದಸ್ಯರುಗಳಿಗೆ.



Scanned with CamScanner